KARNATAKA LEGISLATIVE ASSEMBLY RESEARCH AND REFERENCE BRANCH
PAPER CLIPPINGS
DEPARTMENT / SUBJECT: ಬಜೆಟ್
NAME OF THE NEWS PAPER: ಸಂಯುಕ್ತ ಕರ್ನಾಟಕ DATE: 28/1/20

# ರೈತರು ಕಾರ್ಮಿಕರ ಪರ ಬಜೆಟ್

ಸಂ.ಕ. ಸಮಾಚಾರ ಕೆ.ಆರ್.ನಗರ

ಮಾರ್ಚ್ ತಿಂಗಳಲ್ಲಿ ಮಂಡಿಸಲಿರುವ ರಾಜ್ಯ ಸರ್ಕಾರದ ಬಜೆಟ್‌ನಲ್ಲಿ ರೈತರು, ಕಾರ್ಮಿಕರು, ಮತ್ತು ಮಹಿಳೆಯರ ಪರವಾಗಿ ಹಾಗೂ ಜನತೆಗೆ ಒಳಿತಾಗುವ ಉತ್ತಮ ಕಾರ್ಯಕ್ರಮಗಳನ್ನು ಘೋಷಣೆ ಮಾಡುವುದಾಗಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ತಿಳಿಸಿದರು.

ಮೈಸೂರು ಜಿಲ್ಲೆ ಕೆಆರ್‌ನಗರದ ದೇವಿತಂದ್ರೆ ಗ್ರಾಮದಲ್ಲಿ ಸಪ್ತಮಾತೃಕಾ ದೇವೀರಮ್ಮ ದೇಗುಲದ ರಾಜಗೋಪುರ ಉದ್ಘಾಟನೆ ಮತ್ತು ಬಾಳೆಹೊನ್ನೂರು ವೀರಸೋಮೇಶ್ವರ ರಾಜದೇಶಿಕೇಂದ್ರ ಶಿವಾಚಾರ್ಯರ 28ನೇ ವರ್ಷದ ಪೀಠಾರೋಹಣ ವರ್ಧಂತಿ ಮಹೋತ್ಸವ ಉದ್ಘಾಟಿಸಿ ಮಾತನಾಡಿದರು.



ಮೈಸೂರಿನ ದೇವಿತಂದ್ರೆ ಗ್ರಾಮದಲ್ಲಿ ನಡೆದ ಧಾರ್ಮಿಕ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಯಡಿಯೂರಪ್ಪ ಇನ್ನಿತರ ಗಣ್ಯರು ಭಾಗಿಯಾಗಿದ್ದರು.

ಸ್ವಂತಕ್ಕಾಗಿ ಬದುಕುವುದಕ್ಕಿಂತ ದೇಶಕ್ಕಾಗಿ ದುಡಿಯುವ ಮಕ್ಕಳನ್ನು ಬೆಳೆಸುವ ಮಹಿಳೆಯರು ಅಭಿನಂದನೆಗೆ ಅರ್ಹರು ಎಂದ ಅವರು, ಭವಿಷ್ಯದ ದಿನಗಳಲ್ಲಿ ಮಹಿಳೆಯರ ಬದುಕು ಹಸನಾಗುವಂತಹಾ ವಿನೂತನ ಯೋಜನೆಗಳನ್ನು ಜಾರಿ ಮಾಡುವುದಾಗಿಯೂ ಹೇಳಿದರು.

ಮುಂದಿನ ದಿನಗಳಲ್ಲಿ ರಾಜ್ಯವನ್ನು ಅಭಿವೃದ್ಧಿಯತ್ತ ಕೊಂಡೊಯ್ಯಲು ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿಯೂ ಮುಖ್ಯಮಂತ್ರಿ ಬಿ.ಎಸ್.ಭರವಸೆ ನೀಡಿದರು. ವೀರಸೋಮೇಶ್ವರ ರಾಜದೇಶಿಕೇಂದ್ರ ಶಿವಾಚಾರ್ಯ ಸ್ವಾಮೀಜಿ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಶಾಸಕ ಸಾ.ರಾ.ಮಹೇಶ್, ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ, ರೇಣುಕಾ ಶಿವಾಚಾರ್ಯ ಸ್ವಾಮೀಜಿ, ಉಪಮುಖ್ಯಮಂತ್ರಿ ಡಾ.ಅಶ್ವಥ ನಾರಾಯಣ ಇನ್ನಿತರರಿದ್ದರು.